ಕರ್ನಾಟಕ ಸರ್ಕಾರ

**ನಿರ್ದೇಶಕರ ಕಚೇರಿ, ಪದವಿ ಪೂರ್ವ ಶಿಕ್ಷಣ ಇಲಾಖೆ, 18ನೇ ಅಡ್ಡರಸ್ತೆ, ಮಲ್ಲೇಶ್ವರ, ಬೆಂಗಳೂರು-12**

**ಸಂಖ್ಯೆ: DPUE/EST10/SEN/2/2020-ADMN** ದಿನಾಂಕ :27-09-2021

# ಜ್ಞಾಪನ

**ವಿಷಯ:** ಪದವಿ ಪೂರ್ವ ಶಿಕ್ಷಣ ಇಲಾಖೆಯ ವಾಹನ ಚಾಲಕ ವೃಂದದ ತಾತ್ಕಾಲಿಕ ಜೇಷ್ಠತಾ ಪಟ್ಟಿಯನ್ನು ಪ್ರಕಟಿಸುವ ಬಗ್ಗೆ.

**ಉಲ್ಲೇಖ:**
1. ಈ ಕಚೇರಿ ಜ್ಞಾಪನ ಸಂಖ್ಯೆ: ಪಪೂಶಿಇ-1/ಆವಿ-ಎ/ವಿನಿ-1/ಜೇಷ್ಠತೆ/ 2019-20 ದಿನಾಂಕ: 16-11-2019
2. ಸರ್ಕಾರದ ಪತ್ರ ಸಂಖ್ಯೆ: ಇಪಿ 82 ಡಿಜಿಡಿ 2020 ದಿ:25-09-2020
3. ಪದವಿ ಪೂರ್ವ ಶಿಕ್ಷಣ ಇಲಾಖೆಯ ಅಧೀಕ್ಷಕರ ವೃಂದದ ಬೋಧಕೇತರ ನೌಕರರ ಸೇವಾ ಜೇಷ್ಠತೆ ಪಟ್ಟಿ ಪರಿಷ್ಕರಣೆ ಕುರಿತು ನಡೆದ ದಿನಾಂಕ: 03-07-2021ರ ಸಭಾ ನಡಾವಳಿ.

-*-

ಪದವಿ ಪೂರ್ವ ಶಿಕ್ಷಣ ಇಲಾಖೆಯ ಅಧೀಕ್ಷಕರ ವೃಂದದ ಅಂತಿಮ ಜೇಷ್ಠತಾ ಪಟ್ಟಿಯಿಂದ ಬಾದಿತರಾದ ಹಲವಾರು ನೌಕರರ ಪರಿಶೀಲನಾರ್ಹವಾದ ಆಕ್ಷೇಪಣೆಗಳು ಸ್ವೀಕೃತವಾಗಿದ್ದು, ಪರಿಶೀಲಿಸಿ, ಈ ಸಂಬಂಧ ಮುಂದಿನ ಕ್ರಮ ಕೈಗೊಳ್ಳುವ ಬಗ್ಗೆ ಸರ್ಕಾರದ ಮಾರ್ಗದರ್ಶನ ಕೋರಲಾಗಿತ್ತು. ಉಲ್ಲೇಖ-2ರ ಸರ್ಕಾರದ ಪತ್ರದಲ್ಲಿ ಅಧೀಕ್ಷಕರ ವೃಂದದ ಅಂತಿಮ ಜೇಷ್ಠತಾ ಪಟ್ಟಿಗೆ ಸಂಬಂಧಿಸಿದಂತೆ ನಿಯಮಾನುಸಾರ ಪುನಃ ಆಕ್ಷೇಪಣೆಗಳನ್ನು ಆಹ್ವಾನಿಸಿ ಜೇಷ್ಠತಾ ಪಟ್ಟಿಯನ್ನು ಪುನರ್ ಪ್ರಕಟಿಸಲು ಸರ್ಕಾರವು ಅನುಮತಿ ನೀಡಿರುತ್ತದೆ. ಸದರಿ ಅನುಮತಿ ಮೇರೆಗೆ ಅಧೀಕ್ಷಕರ ವೃಂದದ ಬೋಧಕೇತರ ನೌಕರರ ಸೇವಾ ಜೇಷ್ಠತಾ ಪಟ್ಟಿ ಪರಿಷ್ಕರಣೆ ಮಾಡುವ ಸಂಬಂಧ ಸಮಿತಿಯನ್ನು ರಚಿಸಲಾಗಿರುತ್ತದೆ. ಸದರಿ ಸಮಿತಿಯು ದಿನಾಂಕ: 03-07-2021ರಂದು ಸಭೆ ನಡೆಸಿ ಸಭಾನಡಾವಳಿಯನ್ನು ಸಲ್ಲಿಸಿರುತ್ತಾರೆ. ಸದರಿ ಸಭಾನಡವಳಿಯಲ್ಲಿನ ಅಂಶಗಳನ್ನು ಕೂಲಂಕುಷವಾಗಿ ಅವಲೋಕಿಸಲಾಗಿ, ಕೇವಲ ಅಧೀಕ್ಷಕರ ವೃಂದದ ಜೇಷ್ಠತಾ ಪಟ್ಟಿಯಲ್ಲದೇ ಪೋಷಕ (Feeder cadre) ವೃಂದದ ಹುದ್ದೆಗಳ ಜೇಷ್ಠತಾ ಪಟ್ಟಿಗಳಿಗೂ ಸಹ ನಿಯಮಾನುಸಾರ ಪುನಃ ಆಕ್ಷೇಪಣೆಗಳನ್ನು ಆಹ್ವಾನಿಸಿ ಜೇಷ್ಠತಾ ಪಟ್ಟಿಯನ್ನು ಪುನರ್ ಪ್ರಕಟಿಸಲು ಸೂಕ್ತವೆಂದು ತೀರ್ಮಾನಿಸಲಾಗಿದೆ.

ಮೇಲಿನ ಅಂಶಗಳ ಹಿನ್ನೆಲೆಯಲ್ಲಿ ಉಲ್ಲೇಖ-(1) ರಲ್ಲಿ ಪ್ರಕಟಿಸಿರುವ ಪದವಿ ಪೂರ್ವ ಶಿಕ್ಷಣ ಇಲಾಖೆಯ **ವಾಹನ ಚಾಲಕ ವೃಂದದ** ಅಂತಿಮ ಜೇಷ್ಠತಾ ಪಟ್ಟಿಯನ್ನು ತಕ್ಷಣದಿಂದ ಜಾರಿಗೆ ಬರುವಂತೆ ಹಿಂಪಡೆದು, ಇಲಾಖೆಯ ಪ್ರಾರಂಭದ ಮೂಲ ವೃಂದ (ಕಲ್ಯಾಣ ಕರ್ನಾಟಕ ಮತ್ತು ಕಲ್ಯಾಣ ಕರ್ನಾಟಕೇತರ ನೌಕರರ) ಅನುಬಂಧ-1 ರಲ್ಲಿ, ಉಳಿಕೆ ವೃಂದದ (ಕಲ್ಯಾಣ ಕರ್ನಾಟಕೇತರ ನೌಕರರ) ಅನುಬಂಧ-2 ರಲ್ಲಿ ಹಾಗೂ ಸ್ಥಳೀಯ ವೃಂದ(ಕಲ್ಯಾಣ ಕರ್ನಾಟಕ ನೌಕರರ) ಅನುಬಂಧ-3 ರಲ್ಲಿ **ವಾಹನ ಚಾಲಕ ವೃಂದದ** ನೌಕರರ ತಾತ್ಕಾಲಿಕ ಜೇಷ್ಠತಾ ಪಟ್ಟಿಯನ್ನು ದಿನಾಂಕ: 20.09.2021 ರಲ್ಲಿದ್ದಂತೆ ಪ್ರಕಟಿಸಿದೆ.

ಸದರಿ ಜೇಷ್ಠತಾ ಪಟ್ಟಿಗೆ ಏನಾದರೂ ಆಕ್ಷೇಪಣೆಗಳು ಇದ್ದಲ್ಲಿ ದಿನಾಂಕ: 27 -10-2021ರ ಒಳಗಾಗಿ ಸಂಬಂಧಸಿದ ಬಾದಿತ ನೌಕರರು ತಮ್ಮ ಆಕ್ಷೇಪಣೆ/ಮನವಿಯನ್ನು ದೃಢೀಕೃತ ಪೂರಕ ದಾಖಲಾತಿಗಳೊಂದಿಗೆ ಸಮುಚಿತ ಮಾರ್ಗದ ಮೂಲಕ (ಉಪನಿರ್ದೇಶಕರು/ಪ್ರಾಂಶುಪಾಲರ ಮುಖೇನ) **ಉಪನಿರ್ದೇಶಕರು (ಆಡಳಿತ), ನಿರ್ದೇಶಕರ ಕಛೇರಿ, ಪದವಿ ಪೂರ್ವ ಶಿಕ್ಷಣ ಇಲಾಖೆ, 18 ನೇ ಅಡ್ಡರಸ್ತೆ, ಮಲ್ಲೇಶ್ವರಂ, ಬೆಂಗಳೂರು-560 012** ಇವರಿಗೆ ಅಂಚೆ ಮೂಲಕ ಅಥವಾ ಮುದ್ದಾಂ ಆಗಿ ನಿಗಧಿತ ದಿನಾಂಕದೊಳಗಾಗಿ ಸಲ್ಲಿಸುವಂತೆ ಸೂಚಿಸಲಾಗಿದೆ. ನಿಗದಿತ ಅವಧಿಯ ನಂತರ ಬರುವ ಮನವಿ/ಆಕ್ಷೇಪಣೆಗಳನ್ನು ಪರಿಗಣಿಸಲಾಗುವುದಿಲ್ಲ.

ನಿರ್ದೇಶಕರು
ಪದವಿ ಪೂರ್ವ ಶಿಕ್ಷಣ ಇಲಾಖೆ.

**ಪ್ರತಿಗಳು:**

1. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಇಲಾಖೆ, ಬಹುಮಹಡಿ ಕಟ್ಟಡ, ಬೆಂಗಳೂರು-ಇವರ ಮಾಹಿತಿಗಾಗಿ.
2. ರಾಜ್ಯದ ಪದವಿ ಪೂರ್ವ ಶಿಕ್ಷಣ ಇಲಾಖೆಯ ಎಲ್ಲಾ ಜಿಲ್ಲಾ ಉಪನಿರ್ದೇಶಕರುಗಳಿಗೆ-ತಮ್ಮ ಜಿಲ್ಲಾ ವ್ಯಾಪ್ತಿಯ ಎಲ್ಲಾ ಸರ್ಕಾರಿ ಪದವಿ ಪೂರ್ವ ಕಾಲೇಜುಗಳ ಪ್ರಾಂಶುಪಾಲರಿಗೆ ಮುಂದಿನ ಸೂಕ್ತ ಕ್ರಮಕ್ಕಾಗಿ ಕಳುಹಿಸುವುದು.
3. ಸಹಾಯಕ ನಿರ್ದೇಶಕರು, ಇ-ಆಡಳಿತ ಇವರಿಗೆ ಅಂತರ್‌ಜಾಲದಲ್ಲಿ ಪ್ರಕಟಿಸಲುಹಾಗೂ ಎಲ್ಲಾ ಜಿಲ್ಲಾ ಉಪನಿರ್ದೇಶಕರ ಕಚೇರಿಗೆ ಇ-ಮೇಲ್ ಮಾಡಲು ಸೂಚಿಸಿದೆ.
4. ಎಲ್ಲಾ **ವಾಹನ ಚಾಲಕ** ನೌಕರರುಗಳಿಗೆ-ಸಂಬಂಧಿಸಿದ ಕಚೇರಿಯ ಮುಖ್ಯಸ್ಥರ ಮೂಲಕ.
5. ಕಚೇರಿ ಪ್ರತಿ.

## ಅನುಬಂಧ – 1

ಕರ್ನಾಟಕ ನಾಗರಿಕ ಸೇವಾ (ಜೇಷ್ಠತಾ) ನಿಯಮಗಳು 1957 ರ ಹಾಗೂ ಕರ್ನಾಟಕ ಸಾರ್ವಜನಿಕ ಉದ್ಯೋಗ (ಹೈದರಾಬಾದ್-ಕರ್ನಾಟಕ ಪ್ರದೇಶಕ್ಕೆ ನೇಮಕಾತಿಯಲ್ಲಿ ಮೀಸಲಾತಿ) (ಸ್ಥಳೀಯ ವೃಂದಗಳ ರಚನೆ, ಹಂಚಿಕೆ ಮತ್ತು ವ್ಯಕ್ತಿಗಳ ವರ್ಗಾವಣೆ) ನಿಯಮಗಳು 2013 ರ ನಿಯಮ 7 (4) ರ ಪ್ರಕಾರ ಪದವಿ ಪೂರ್ವ ಶಿಕ್ಷಣ ಇಲಾಖೆಯ ಪ್ರಾರಂಭದ ಮೂಲ ವೃಂದದಲ್ಲಿನ (ಕಲ್ಯಾಣ ಕರ್ನಾಟಕ ಮತ್ತು ಕಲ್ಯಾಣ ಕರ್ನಾಟಕೇತರ ನೌಕರನ್ನೊಳಗೊಂಡ) ದಿನಾಂಕ: 20.09.2021 ರಲ್ಲಿದ್ದಂತೆ ವಾಹನ ಚಾಲಕ ವೃಂದದ ತಾತ್ಕಾಲಿಕ ಜೇಷ್ಠತಾ ಪಟ್ಟಿ

| ಕ್ರಮ ಸಂಖ್ಯೆ | ಹೆಸರು ಶ್ರೀ/ಶ್ರೀಮತಿ | ನೇಮಕ ವಿಧ | ಜನ್ಮ ದಿನಾಂಕ | ಸೇವೆಗೆ ಸೇರಿದ ದಿನಾಂಕ | ವಾಹನ ಚಾಲಕರಾಗಿ ನೇಮಕಾತಿ ಹೊಂದಿದ ದಿನಾಂಕ | ಮೀಸಲಾತಿ | ಷರಾ |
|---|---|---|---|---|---|---|---|
| 1. | SESHAPPA | DIR/EMP | 15-01-1935 | 29-04-1971 | 29-04-1971 | SC | |
| 2. | RAMACHANDRAIAH | DIR/EMP | 25-04-1955 | 07-12-1979 | 07-12-1979 | ST | COC |
| 3. | PULEKESHI G | DIR/EMP | 23-12-1953 | 18-03-1985 | 18-03-1985 | - | COC |
| 4. | SHANKAR NAIK | DIR/EMP | 01-06-1966 | 29-06-1994 | 29-06-1994 | SC | COC |
| 5. | RAMESH | DIR/EMP | 14-06-1961 | 03-04-1996 | 03-04-1996 | - | COC |
| 6. | MAHADEVAIAH B V | DIR/EMP | 20-05-1964 | 04-04-1996 | 04-04-1996 | - | ದಿನಾಂಕ 19.08.2021ರಲ್ಲಿ ಹಿರಿಯ ವಾಹನ ಚಾಲಕರಾಗಿ ಬಡ್ತಿ ಹೊಂದಿರುತ್ತಾರೆ. |
| 7. | SRINIVAS A | DIR/EMP | 26-09-1963 | 20-05-1996 | 20-05-1996 | - | |
| 8. | MALLAPPA | DIR/EMP | 22-01-1966 | 13-02-1999 | 13-02-1999 | - | |
| 9. | JAGADEVAPPA DHOLAPPA | DIR/EMP | 20-04-1964 | 01-03-1999 | 01-03-1999 | - | |
| 10. | THAMMAIAH S | DIR/EMP | 08-04-1963 | 01-03-1999 | 01-03-1999 | SC | |
| 11. | BABU SANADI | DIR/EMP | 01-05-1967 | 04-03-1999 | 04-03-1999 | - | COC |
| 12. | SURESHA M C | DIR/EMP | 20-06-1966 | 24-03-1999 | 24-03-1999 | SC | ದಿನಾಂಕ 19.08.2021ರಲ್ಲಿ ಹಿರಿಯ ವಾಹನ ಚಾಲಕರಾಗಿ ಬಡ್ತಿ ಹೊಂದಿರುತ್ತಾರೆ. |
| 13. | KALEEMULLA | DIR/EMP | 22-07-1968 | 26-03-1999 | 26-03-1999 | - | COC |
| 14. | VENKATESHA MURTHY | DIR/EMP | 23-06-1965 | 27-03-1999 | 27-03-1999 | - | |
| 15. | RAJAPPA T | DIR/EMP | 12-07-1971 | 19-01-2000 | 19-01-2000 | - | COC |
| 16. | BHAGAPPA CHALAWADI | DIR/EMP | 01-01-1964 | 13-01-2000 | 13-01-2000 | - | |
| 17. | AYUB BASHA | DIR/EMP | 01-06-1967 | 04-02-2000 | 04-02-2000 | - | |
| 18. | CHITTARAJANDAS | DIR/EMP | 30-06-1964 | 21-02-2000 | 21-02-2000 | - | COC |
| 19. | CHAYAPRAKASH | DIR/EMP | 06-12-1966 | 03-03-2000 | 04-03-2000 | - | COC |
| 20. | KOUSAR PASHA | DIR/EMP | 20-05-1972 | 25-07-2001 | 25-07-2001 | - | COC |

Bruchal